ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ.ಸಂಖ್ಯೆಃ**1576/2024**

ಫಿರ್ಯಾದಿ ಃ ಬಿ.ಎಲ್. ಪ್ರಭಾಕರ್,
ವಯಸ್ಸು ಸುಮಾರು 66 ವರ್ಷ,
ಬಿನ್ ಲೋಕಪ್ಪಗೌಡ,
ಕಾಫಿ ಪ್ಲಾಂಟರ್, ವಾಸಃ ದೊಡ್ಡನಂದಿ,
ಬಣಕಲ್, ಬಣಕಲ್ ಹೋಬಳಿ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

ಆರೋಪಿ ಃ ಶ್ರೀ ರಮೇಶ್ ಮಾಡ್ಲಗಿರಿ,
ವಯಸ್ಸು ಸುಮಾರು 41 ವರ್ಷ,
ಬಿನ್ ಹುಚ್ಚಿಂಗಪ್ಪ ಮಾಡ್ಲಗಿರಿ,
ವಾಸಃ ಅಡವಿಹಳ್ಳಿ ಗ್ರಾಮ, ಕಣವಿಹಳ್ಳಿ,
ಹರಪ್ಪನಹಳ್ಳಿ ತಾಲ್ಲೂಕು,
ದಾವಣಗೆರೆ ಜಿಲ್ಲೆ.

ಆಪಾದನೆಯ ಸಾರಾಂಶ

ಶ್ರೀಮತಿ ಸುರಕ್ಷ ಕೆ.ಕೆ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು 2021 ರಿಂದಲೂ ಕಾಫೀ ತೋಟಗಳಿಗೆ ಕೆಲಸಗಾರರನ್ನು ಪೂರೈಸುತ್ತಿದ್ದು, ಪಿರ್ಯಾದಿಯ ತೋಟಕ್ಕೆ ಕೆಲಸ ಮಾಡಲು ಕೆಲಸಗಾರರನ್ನು ಪೂರೈಸುವುದಾಗಿ ಪಿರ್ಯಾದಿಯಿಂದ ಹಲವು ಕಂತುಗಳಲ್ಲಿ ದಿನಾಂಕಃ 28.06.2023 ರ ವರೆಗೆ ಮುಂಗಡವಾಗಿ ಒಟ್ಟು ರೂ.2,00,000/- ಹಣವನ್ನು ಪಡೆದಿದ್ದು, ನಂತರ ಸದರಿ ಹಣವನ್ನು ಮರುಪಾವತಿ ಮಾಡುವ ಸಲುವಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಹರಪ್ಪನಹಳ್ಳಿ ಶಾಖೆಯ ಚೆಕ್ 774330, ದಿನಾಂಕ 29.12.2023, ರೂ.2,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿ., ಬಣಕಲ್ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Funds insufficient) ಎಂದು ಹಿಂಬರಹ ನೀಡಿದ್ದು ಇರುತ್ತದೆ. ಕಾರಣ, ಫಿರ್ಯಾದಿಯು ದಿನಾಂಕ 03.04.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು

ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 03.05.2025 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕಃ 03.05.2025